# ಸಹಾಯಕ ಆಯುಕ್ತರ ನ್ಯಾಯಾಲಯ, ಬಳ್ಳಾರಿ

ಸಂ: ಕಂದಾಯ/ಅಪೀಲು/158/15-16

ದಿನಾಂಕ :05-08-2016

ಉಪಸ್ಥಿತರು: ಶ್ರೀ ಲೋಕೇಶ್ ಪಿ.ಎನ್ (ಕ.ಆ.ಸೇ)

ಸಹಾಯಕ ಆಯುಕ್ತರು, ಬಳ್ಳಾರಿ.

| ವಾದಿಗಳು | ಪ್ರತಿವಾದಿಗಳು |
|---|---|
| 1.ಶ್ರೀ ಸವತ್ ಸಾಬ್ ತಂದೆ ಲೇಟ್ ಹಸನ್ ಸಾಬ್, ಸಾ\|\|ಜಾಲಿಬೆಂಚಿ ಗ್ರಾಮ, ತಾ\|\|ಬಳ್ಳಾರಿ<br><br>(ಶ್ರೀ ಟಿ ಪ್ರಕಾಶ್, ಶ್ರೀ ಟಿ ನೂರ್ ಬಾಷ ಹಾಗೂ ಶ್ರೀ ಅನ್ವರ್ ಬಾಷ, ವಕೀಲರುಗಳು, ಬಳ್ಳಾರಿ) | 1. ತಹಶೀಲ್ದಾರರು, ಬಳ್ಳಾರಿ<br>2. ಕಂದಾಯ ನಿರೀಕ್ಷಕರು, ಕೋಳೂರು<br>3. ಗ್ರಾಮ ಲೆಕ್ಕಾಧಿಕಾರಿಗಳು, ಜಾಲಿಬೆಂಚಿ |

ದಾವಾ ಜಮೀನಿನ ವಿವರ :-

| ತಾಲ್ಲೂಕು | ಗ್ರಾಮ | ಸ. ನಂ. | ವಿಸ್ತೀರ್ಣ (ಎಕರೆಗಳಲ್ಲಿ) |
|---|---|---|---|
| ಬಳ್ಳಾರಿ | ಜಾಲಿಬೆಂಚಿ | 126/B/3(ಪೈ) | 2.32 |

--@@@--

ವಾದಿಯು ಅವರ ವಕೀಲರ ಮುಖಾಂತರ ಕರ್ನಾಟಕ ಭೂ ಕಂದಾಯ ಕಾಯ್ದೆ 1964 ರ ಕಲಂ 136(2) ರಡಿಯಲ್ಲಿ ಕಂದಾಯ ನಿರೀಕ್ಷಕರು, ಕೋಳೂರು ಇವರ ಎಂ.ಆರ್ ನಂ 3/1985-86 ದಿನಾಂಕ: 10-08-1985 ರ ಆದೇಶದ ವಿರುದ್ಧ ಈ ನ್ಯಾಯಾಲಯಕ್ಕೆ ಮೇಲ್ಮನವಿಯನ್ನು ಸಲ್ಲಿಸಿರುತ್ತಾರೆ. ಸದರಿ ಮೇಲ್ಮನವಿಯನ್ನು ಸಲ್ಲಿಸುವಲ್ಲಿ ಆದ ವಿಳಂಬಕ್ಕೆ ಕಾಲಮಿತಿ ಕಾಯ್ದೆಯಡಿ ವಿಳಂಬ ಮನ್ನಾಕ್ಕೆ ಅರ್ಜಿ ಸಲ್ಲಿಸಿರುತ್ತಾರೆ. ವಿಳಂಬ ಮನ್ನಾ ಮಾಡಿ ಪ್ರಕರಣವನ್ನು ದಾಖಲಿಸಿಕೊಳ್ಳಲಾಗಿರುತ್ತದೆ. ನೈಸರ್ಗಿಕ ನ್ಯಾಯ ದೃಷ್ಠಿಯಿಂದ ಉಭಯ ಪಕ್ಷಗಾರರಿಗೂ ನೋಟೀಸಗಳನ್ನು ಕಳುಹಿಸಿ ದಿನಾಂಕ: 13-05-2016 ಮತ್ತು 05-082016 ರಂದು ಪ್ರಕರಣದ ವಿಚಾರಣೆಯನ್ನು ಕೈಗೊಳ್ಳಲಾಗಿರುತ್ತದೆ.

ಸದರಿ ಪ್ರಕರಣಕ್ಕೆ ಸಂಬಂಧಿಸಿದಂತೆ ವಾದಿಗಳು ಅವರ ವಕೀಲರು ಮುಖಾಂತರ ದಿನಾಂಕ: 05-08-2016 ರಂದು ಈ ನ್ಯಾಯಾಲಯಕ್ಕೆ ಹಾಜರಾಗಿ, ಬಳ್ಳಾರಿ ತಾಲ್ಲೂಕಿನ ಜಾಲಿಬೆಂಚಿ ಗ್ರಾಮದ ಸ.ನಂ 126/B/3(ಪೈ) ವಿಸ್ತೀರ್ಣ: 2.32 ಎಕರೆ ಜಮೀನಿಗೆ ಸಂಬಂಧಿಸಿದಂತೆ ಕಂದಾಯ ನಿರೀಕ್ಷಕರು, ಕೋಳೂರು ಇವರ ಎಂ.ಆರ್ ನಂ 3/1985-86 ದಿನಾಂಕ: 10-08-2005 ರಲ್ಲಿ ಮನವಿದಾರರ ತಂದೆಯ ಹೆಸರು ತಪ್ಪಾಗಿ ನಮೂದಾಗಿರುವ (ಹಸನ್ ಸಾಬ್, ಬದಲಾಗಿ ಕಾಶೀಂಸಾಬ್) ಎಂದು ನಮೂದಾಗಿರುವ ವಿರುದ್ಧ ಮೇಲ್ಮನವಿಯನ್ನು ಸಲ್ಲಿಸಿರುತ್ತಾರೆ.

ಮುಂದುವರೆದು ಪ್ರಕರಣವನ್ನು ಪರಿಶೀಲಿಸಿಲಾಗಿ ನೋಂದಾಯಿತ ಕ್ರಯಪತ್ರ ಮತ್ತು ಪಹಣಿ ದಾಖಲೆಗಳನ್ನು ಪರಿಶೀಲಿಸಲಾಗಿ ಕ್ರಯ ಪತ್ರದಂತೆ ತಂದೆಯ ಹೆಸರನ್ನು ತಿದ್ದುಪಡಿ ಮಾಡುವುದು ಅಗತ್ಯವಿರುತ್ತದೆ. ಕಾರಣ ಬಳ್ಳಾರಿ ತಾಲ್ಲೂಕಿನ ಜಾಲಿಬೆಂಚಿ ಗ್ರಾಮದ ಸ.ನಂ 126/B/3 (ಪೈ) ವಿಸ್ತೀರ್ಣ: 2.32 ಎಕರೆ ಜಮೀನಿಗೆ ಸಂಬಂಧಿಸಿದಂತೆ ಈ ಕೆಳಕಂಡಂತೆ ಆದೇಶಿಸಲಾಗಿದೆ.

:: ಆದೇಶ ::

ಪೀಠಿಕೆಯಲ್ಲಿ ವಿವರಿಸಿದ ಕಾರಣಗಳ ಹಿನ್ನೆಲೆಯಲ್ಲಿ ಬಳ್ಳಾರಿ ತಾಲ್ಲೂಕಿನ ಜಾಲಿಬೆಂಚಿ ಗ್ರಾಮದ ಸ.ನಂ 126/B/3(ಪೈ) ವಿಸ್ತೀರ್ಣ: 2.32 ಎಕರೆ ಜಮೀನಿಗೆ ಸಂಬಂಧಿಸಿದಂತೆ ಈ ಆದೇಶ ತಲುಪಿದ ಏಳುದಿನಗಳಲ್ಲಿ ಅಪೀಲುದಾರರಿಂದ ಅಗತ್ಯ ದಾಖಲೆಗಳನ್ನು ಪಡೆದು ಸೂಕ್ತ ತಿದ್ದುಪಡಿ ಪ್ರಸ್ತಾವನೆಯನ್ನು ಈ ಪ್ರಾಧಿಕಾರದ ಮುಂದೆ ಮಂಡಿಸಿ ಅನುಮೋದನೆ ಪಡೆಯಲು ತಹಶೀಲ್ದಾರರು ಬಳ್ಳಾರಿ ಇವರಿಗೆ ಆದೇಶಿಸಿದೆ.

ಈ ಆದೇಶವನ್ನು ಹೇಳಿ, ಬರೆಯಿಸಿ, ತಪ್ಪುಗಳನ್ನು ತಿದ್ದಿ ದಿನಾಂಕ 05-08-2016 ರಂದು ಬಹಿರಂಗ ನ್ಯಾಯಾಲಯದಲ್ಲಿ ಘೋಷಿಸಲಾಗಿದೆ.

ಸಹಾಯಕ ಆಯುಕ್ತರು,
ಬಳ್ಳಾರಿ.

ಪ್ರತಿಯನ್ನು ವಾದಿಗಳಿಗೆ ಮತ್ತು ತಹಶೀಲ್ದಾರರು ಬಳ್ಳಾರಿ ಇವರಿಗೆ ಸೂಕ್ತ ಕ್ರಮಕ್ಕಾಗಿ